## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯ ಯೋಜನಾ ಮಂಡಳಿಗೆ ಸದಸ್ಯ ಕಾರ್ಯದರ್ಶಿಯ ನೇಮಕಾತಿ ಬಗ್ಗೆ

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ: ಪಿಡಿ 37 ಎಸ್‌ಪಿಬಿ 2013 ದಿನಾಂಕ 26.11.2014

2. ಅಧಿಸೂಚನೆ ಸಂಖ್ಯೆ: ಸಿಆಸುಇ 180 ಸೇಅಸೆ 2016 ದಿನಾಂಕ 21.4.2016

*****

ಪ್ರಸ್ತಾವನೆ:

ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಹಾಗೂ ಶ್ರೀ ಸಿ.ಎಂ.ಇಬ್ರಾಹಿಂ ಇವರ ಉಪಾಧ್ಯಕ್ಷತೆಯಲ್ಲಿ ಕರ್ನಾಟಕ ರಾಜ್ಯ ಯೋಜನಾ ಮಂಡಳಿಯನ್ನು ಮೇಲೆ ಕ್ರ.ಸಂ.(1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಪುನರ್ ರಚಿಸಲಾಗಿದ್ದು, ಶ್ರೀಮತಿ ಬಿದಿಷಾ ಚೌಧುರಿ, ಅಪರ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ ಇವರನ್ನು ಮಂಡಳಿಯ ಸದಸ್ಯ ಕಾರ್ಯದರ್ಶಿಯನ್ನಾಗಿ ನೇಮಿಸಲಾಗಿದೆ.

ಶ್ರೀಮತಿ ಉಮಾ ಮಹಾದೇವನ್, ಭಾ.ಆ.ಸೇ., ಸರ್ಕಾರದ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರನ್ನು ಮೇಲೆ ಕ್ರ.ಸಂ.(2)ರಲ್ಲಿ ಓದಲಾದ ಅಧಿಸೂಚನೆಯಲ್ಲಿ ರಾಜ್ಯ ಯೋಜನಾ ಮಂಡಳಿಯ ಕಾರ್ಯದರ್ಶಿ ಹಾಗೂ ಸದಸ್ಯ ಕಾರ್ಯದರ್ಶಿ ಹುದ್ದೆಗೆ ಸಮವರ್ತಿತ ಪ್ರಭಾರದಲ್ಲಿ ನೇಮಿಸಲಾಗಿದೆ.

ಈ ಬಗ್ಗೆ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಪಿಡಿ 42 ಎಸ್‌ಪಿಬಿ 2016 ದಿನಾಂಕ:30.04.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಉಮಾ ಮಹಾದೇವನ್, ಭಾ.ಆ.ಸೇ., ಸರ್ಕಾರದ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರನ್ನು ರಾಜ್ಯ ಯೋಜನಾ ಮಂಡಳಿಯ ಸದಸ್ಯ ಕಾರ್ಯದರ್ಶಿಯನ್ನಾಗಿ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಲಿತಾ)
ಸರ್ಕಾರದ ಅಧೀನ ಕಾರ್ಯದರ್ಶಿ,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, (ಲೆ & ಹ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.

-----2